RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ


| ಭಾಗ– IV-A | ಬೆಂಗಳೂರು, ಗುರುವಾರ, ಜನವರಿ ೨೧, ೨೦೧೬ (ಮಾಘ ೦೧, ಶಕ ವರ್ಷ ೧೯೩೭) | ನಂ. ೧೧೯ |
|---|---|---|
| Part– IV-A | Bengaluru, Thursday, January 21, 2016 (Magha 01, Shaka Varsha 1937) | No. 119 |


ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯ

ಅಧಿಸೂಚನೆ

ಸಂ. ಗ್ರಾಅಪ: 288: ಜಿಪಸ:2015, ಬೆಂಗಳೂರು, ದಿನಾಂಕ: 21-01-2016

ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 (1993ರ ಕರ್ನಾಟಕ ಅಧಿನಿಯಮ ಸಂಖ್ಯೆ:14)ರ ಪ್ರಕರಣ 138ರೊಂದಿಗೆ ಓದಲಾದಂತೆ, ಪ್ರಕರಣ 311ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಕರ್ನಾಟಕ ಪಂಚಾಯತ್ ರಾಜ್ (ತಾಲ್ಲೂಕು ಪಂಚಾಯತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಹುದ್ದೆಗಳ ಮೀಸಲಾತಿ) ನಿಯಮಗಳು, 2005ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಈ ಕೆಳಕಂಡ ಕರಡು ತಿದ್ದುಪಡಿ ನಿಯಮಗಳನ್ನು ಸದರಿ ಅಧಿನಿಯಮದ 311ನೇ ಪ್ರಕರಣದ ಉಪ ಪ್ರಕರಣ(1)ರ ಅಡಿಯಲ್ಲಿ ಅಗತ್ಯಪಡಿಸಲಾದಂತೆ, ಅದರಿಂದ ಬಾಧಿತರಾಗಬಹುದಾದ ವ್ಯಕ್ತಿಗಳ ಮಾಹಿತಿಗಾಗಿ ಈ ಮೂಲಕ ಪ್ರಕಟಿಸಲಾಗಿದೆ ಮತ್ತು ಸದರಿ ತಿದ್ದುಪಡಿ ನಿಯಮಗಳ ಕರಡನ್ನು ಸರ್ಕಾರಿ ರಾಜ್ಯ ಪತ್ರದಲ್ಲಿ ಪ್ರಕಟಗೊಂಡ ದಿನಾಂಕದಿಂದ ಮೂವತ್ತು ದಿನಗಳ ನಂತರ ಪರಿಗಣನೆಗೆ ತೆಗೆದುಕೊಳ್ಳಲಾಗುವುದೆಂದು ಈ ಮೂಲಕ ಸೂಚಿಸಲಾಗಿದೆ.

ಮೇಲೆ ನಿರ್ದಿಷ್ಟ ಪಡಿಸಿದ ಅವಧಿಯು ಮುಕ್ತಾಯವಾಗುವುದಕ್ಕೆ ಮೊದಲು ಕರಡಿಗೆ ಸಂಬಂಧಿಸಿದಂತೆ, ಯಾವೊಬ್ಬ ವ್ಯಕ್ತಿಯಿಂದ ರಾಜ್ಯ ಸರ್ಕಾರವು ಸ್ವೀಕರಿಸಬಹುದಾದ ಯಾವುದೇ ಆಕ್ಷೇಪಣೆ ಅಥವಾ ಸಲಹೆಯನ್ನು ರಾಜ್ಯ ಸರ್ಕಾರವು ಪರಿಗಣಿಸುವುದು, ಆಕ್ಷೇಪಣೆಗಳು ಮತ್ತು ಸಲಹೆಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶೀಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಡಾ: ಅಂಬೇಡ್ಕರ್ ವೀಧಿ, ಬೆಂಗಳೂರು-56001 ಇವರಿಗೆ ಕಳುಹಿಸಬಹುದಾಗಿದೆ.

ಕರಡು ನಿಯಮಗಳು

1. ಹೆಸರು ಮತ್ತು ಪ್ರಾರಂಭ:- (1) ಈ ನಿಯಮಗಳನ್ನು ಕರ್ನಾಟಕ ಪಂಚಾಯತ್ ರಾಜ್ (ತಾಲ್ಲೂಕು ಪಂಚಾಯತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಹುದ್ದೆಗಳ ಮೀಸಲಾತಿ) ನಿಯಮಗಳು, 2016 ಎಂದು ಕರೆಯತಕ್ಕದ್ದು.
   (2) ಅವು ಸರ್ಕಾರದ ರಾಜ್ಯ ಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.
2. ನಿಯಮ 3ಕ್ಕೆ ತಿದ್ದುಪಡಿ:- ಕರ್ನಾಟಕ ಪಂಚಾಯತ್ ರಾಜ್ (ತಾಲ್ಲೂಕು ಪಂಚಾಯತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಹುದ್ದೆಗಳ ಮೀಸಲಾತಿ) ನಿಯಮಗಳು-2010 ರ ನಿಯಮ 3 ರ ಉಪ ನಿಯಮ (1)ರಲ್ಲಿರುವ ಕೋಷ್ಟಕದ ಬದಲಾಗಿ ಈ ಕೆಳಗಿನಂತೆ ಕೋಷ್ಟಕವನ್ನು ಪ್ರತ್ಯಾಯೋಜಿಸತಕ್ಕದ್ದು. ಅಂದರೆ,-

"ಕೋಷ್ಟಕ"

| ಕ್ರಸಂ | ಪ್ರವರ್ಗ | ಅಧ್ಯಕ್ಷ | | ಉಪಾಧ್ಯಕ್ಷರು | |
|---|---|---|---|---|---|
| | | ಒಟ್ಟು | ಮಹಿಳೆಯರು | ಒಟ್ಟು | ಮಹಿಳೆಯರು |
| 1 | ಅನುಸೂಚಿತ ಜಾತಿ | 35 | 17 | 35 | 17 |
| 2 | ಅನುಸೂಚಿತ ಪಂಗಡ | 16 | 8 | 16 | 8 |
| 3 | ಹಿಂದುಳಿದ ವರ್ಗಗಳು | | | | |
| | 1. ಪ್ರವರ್ಗ-ಎ | 30 | 15 | 30 | 15 |
| | 2. ಪ್ರವರ್ಗ-ಬಿ | 7 | 4 | 7 | 4 |
| 4 | ಮೀಸಲಿಡದ ಸಾಮಾನ್ಯ ವರ್ಗ | 88 | 44 | 88 | 44 |
| | ಒಟ್ಟು | **176** | **88** | **176** | **88** |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಎಂ.ಬಿ. ಧೋತ್ರೆ

ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿಐ) 1000 ಪ್ರತಿಗಳು)